# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 509 (651)
ಸದಸ್ಯರ ಹೆಸರು : ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 22-07-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ದ್ವಿತೀಯ ಪಿ.ಯು.ಸಿ ವಿಜ್ಞಾನ ವಿಷಯಕ್ಕೆ ಸಂಬಂಧಿಸಿದ ಮೌಲ್ಯಮಾಪನ ಕೇಂದ್ರಗಳನ್ನು ಜಿಲ್ಲಾವಾರು ವಿಕೇಂದ್ರೀಕರಣಗೊಳಿಸುವ ಮೂಲಕ ಸಮಯ ಕಾರ್ಯದೊತ್ತಡ ಹಾಗೂ ಫಲಿತಾಂಶದ ವೇಗವನ್ನು ಹೆಚ್ಚಿಸಿಸುವುದು ಮತ್ತು ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಸಂಬಂಧ ಸರ್ಕಾರದ ಹಂತದಲ್ಲಿ ಚರ್ಚೆ ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ವಿಜ್ಞಾನದ ವಿಷಯಗಳಲ್ಲಿ ಪಡೆದ ಅಂಕಗಳು ವೃತ್ತಿ ಶಿಕ್ಷಣ ಹಾಗೂ ಉನ್ನತ ಶಿಕ್ಷಣಕ್ಕೆ ಪ್ರವೇಶ ಪಡೆಯುವಲ್ಲಿ ನಿರ್ಣಾಯಕ ಪಾತ್ರ ವಹಿಸುವ ಹಿನ್ನೆಲೆಯಲ್ಲಿ ಮತ್ತು ಸದರಿ ವಿಷಯಗಳು ಹೆಚ್ಚಿನ ಸೂಕ್ಷ್ಮತೆಗೆ ಒಳಪಡುವ ಕಾರಣ, ಮೌಲ್ಯಮಾಪನ ಕೇಂದ್ರಗಳ ಮೇಲೆ ತೀವ್ರ ನಿಗಾ ವಹಿಸುವ ನಿಟ್ಟಿನಲ್ಲಿ ವಿಜ್ಞಾನ ವಿಷಯದ ಮೌಲ್ಯಮಾಪನ ಕೇಂದ್ರಗಳನ್ನು ಬೆಂಗಳೂರಿನಲ್ಲಿಯೇ ಹೆಚ್ಚಿನ ಸಂಖ್ಯೆಯಲ್ಲಿ ನಿಗದಿಪಡಿಸಲಾಗುತ್ತಿದೆ. ಸದರಿ ವಿಷಯಗಳಲ್ಲಿ ಮೌಲ್ಯಮಾಪಕರುಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ನೇಮಿಸಿ ನಿಗದಿತ ಅವಧಿಯೊಳಗೆ ಫಲಿತಾಂಶ ಪ್ರಕಟಿಸಲು ಕ್ರಮ ವಹಿಸಲಾಗುತ್ತಿದೆ. |
| ಆ) | ಕರ್ನಾಟಕ ಪದವಿಪೂರ್ವ ಶಿಕ್ಷಣ ಇಲಖೆ ಹಲವಾರು ಸ್ವರ್ಧಾತ್ಮಕ ಪರೀಕ್ಷೆಗಳನ್ನು ಯಶಸ್ವಿಯಾಗಿ ಮಾಡುವ ಮೂಲಕ ಇಡೀ ದೇಶಕ್ಕೆ ಮಾದರಿಯಾದ ಇಲಾಖೆಯಾಗಿದ್ದು, ಯವುದೇ 11 ಸಂದರ್ಭದಲ್ಲೂ ಪದವಿಪೂರ್ವ ಶಿಕ್ಷಣ ಇಲಾಖೆಯನ್ನು ಇತರೆ ಯಾವುದೇ ಇಲಾಖೆಯೊಂದಿಗೆ ವಿಲೀನಗೊಳಿಸದಂತೆ ಸರ್ಕಾರಕೈಗೊಂಡಿರುವ ಕ್ರಮಗಳಾವುವು? | ಪದವಿ ಪೂರ್ವ ಶಿಕ್ಷಣ ಇಲಾಖೆಯನ್ನು ಇತರೆ ಯಾವುದೇ ಇಲಾಖೆಯೊಂದಿಗೆ ವಿಲೀನಗೊಳಿಸುವ ಪ್ರಸ್ತಾವನೆ ಇರುವುದಿಲ್ಲ. |

**ಸಂಖ್ಯೆ: ಇಪಿ 247 ಡಿಜಿಡಬ್ಲ್ಯೂ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು